ರಸಗೊಬ್ಬರದ ಬೆಲೆ ಏರಿಕೆಯಿಂದ ರೈತರಿಗೆ ತೊಂದರೆ.

1076 (676): ಶ್ರೀ ವೈ. ಕೆ. ರಾಮಯ್ಯ (ಕುಣಿಗಲ್):–

ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ರಾಷ್ಟ್ರದಲ್ಲಿ ರಸಗೊಬ್ಬರದ ಮೇಲೆ ನೀಡುತ್ತಿದ್ದ ಸಹಾಯ ಧನವನ್ನು ಕೇಂದ್ರ ಸರ್ಕಾರ ನೀಡದೆ ಇರುವುದರಿಂದ ರಸಗೊಬ್ಬರದ ಬೆಲೆ ಹೆಚ್ಚಾಗಿ ಕೃಷಿ ಬೆಳೆಗಳ ಉತ್ಪತ್ತಿ ಕಡಿಮೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಬಂದಿದ್ದಲ್ಲಿ, ರೈತರ ಈ ತೊಂದರೆಯನ್ನು ನಿವಾರಣೆ ಮಾಡಲು ಸರ್ಕಾರ ಯಾವುದಾದರೂ ನಿರ್ದಿಷ್ಟ ಕಾರ್ಯಕ್ರಮ ರೂಪಿಸಿಕೊಳ್ಳುವದೇ ?

ಶ್ರೀ ಎನ್. ಹುಚ್ಚಮಾಸ್ತಿಗೌಡ (ಕೃಷಿ ಸಚಿವರು):–

ಅ. ಕೇಂದ್ರ ಸರ್ಕಾರ ರಂಜಕ, ಪೊಟ್ಯಾಷ್ ಮತ್ತು ಕಾಂಪ್ಲೆಕ್ಸ್, ರಸಗೊಬ್ಬರಗಳಿಗೆ ನೀಡುತ್ತಿದ್ದ ಸಹಾಯ ಧನವನ್ನು ಹಿಂತೆಗೆದುಕೊಂಡ ಮೇಲೆ, ಈ ರಸಗೊಬ್ಬರಗಳ ಬೆಲೆ ಹೆಚ್ಚಾಗಿದ್ದು, ಬಳಕೆ ಕಡಿಮೆಯಾಗಿದೆ. ಕಡಿಮೆಯಾಗುತ್ತಿರುವ ಬಳಕೆ ಮುಂದುವರಿದರೆ, ಕೃಷಿ ಉತ್ಪಾದನೆ ಮೇಲೆ ದುಷ್ಪರಿಣಾಮ ಉಂಟಾಗುವುದು.

ಆ. ರಸಗೊಬ್ಬರಗಳ ಬೆಲೆ ಹೆಚ್ಚಳದಿಂದ ಅವುಗಳ ಬಳಕೆ ಕಡಿಮೆಯಾಗುತ್ತಿರುವುದನ್ನು ಗಮನಿಸಿ ಸರ್ಕಾರ ಈಗಾಗಲೇ ರೈತರಿಗೆ ರಿಯಾಯಿತಿ ದರದಲ್ಲಿ ರಸಗೊಬ್ಬರಗಳನ್ನು ವಿತರಣೆ ಮಾಡುವ ಯೋಜನೆಯನ್ನು ಜಾರಿಗೊಳಿಸಿದೆ.

ರಾಜ್ಯದಲ್ಲಿ ತಾಳೆ ಎಣ್ಣೆ ಗಿಡಗಳನ್ನು ಬೆಳೆಸುವ ಯೋಜನೆ.

1077 (677): ಶ್ರೀ ವೈ. ಕೆ. ರಾಮಯ್ಯ (ಕುಣಿಗಲ್):–

ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ರಾಜ್ಯದಲ್ಲಿ ತಾಳೆ ಎಣ್ಣೆ ಗಿಡಗಳನ್ನು ಬೆಳೆಸಲು ಹಮ್ಮಿಕೊಂಡಿರುವ ಯೋಜನೆಗಳು ಯಾವುವು (ಪೂರ್ಣ ವಿವರ ಒದಗಿಸುವುದು);

ಆ. ಇನ್ನು ಎಷ್ಟು ದಿನಗಳಲ್ಲಿ ಈ ಮರಗಳಿಂದ ಕಾಯಿಗಳು ಬರುವ ನಿರೀಕ್ಷೆ ಇದೆ;

ಇ. ಈ ಕಾಯಿಗಳಿಂದ ಎಣ್ಣೆಯನ್ನು ತೆಗೆಯಲು ಅವಶ್ಯಕ ಇರುವ ಕಾರ್ಖಾನೆ ಸ್ಥಾಪಿಸಲು ಸರ್ಕಾರ ಏನು ಏರ್ಪಾಟು ಮಾಡಿದೆ ?

ಶ್ರೀ ಎ. ಕೃಷ್ಣಪ್ಪ (ತೋಟಗಾರಿಕೆ ರಾಜ್ಯ ಸಚಿವರು):–

ಅ. ರಾಜ್ಯದಲ್ಲಿ ತಾಳೆ ಎಣ್ಣೆ ಗಿಡಗಳನ್ನು ಬೆಳೆಸಲು ಹಮ್ಮಿಕೊಂಡಿರುವ ಯೋಜನೆಗಳು ಮತ್ತು ಅವುಗಳ ಪೂರ್ಣ ವಿವರ ಕೆಳಕಂಡಂತಿರುತ್ತದೆ.

1. ತಾಳೆಬೆಳೆ ಪ್ರಾತ್ಯಕ್ಷತಾ ಯೋಜನೆ:–

ಭಾರತ ಸರ್ಕಾರದ ಬಯೋಟೆಕ್ನಾಲಜಿ ಇಲಾಖೆಯ ಆರ್ಥಿಕ ನೆರವಿನೊಡನೆ ಶಿವಮೊಗ್ಗ ಜಿಲ್ಲೆಯ ಭದ್ರಾ ಅಚ್ಚುಕಟ್ಟು ಪ್ರದೇಶದ 850 ರೈತರ ಜಮೀನಿನಲ್ಲಿ 1114 ಹೆಕ್ಟೇರ್‌ನಲ್ಲಿ ತಾಳೆ ಬೆಳೆಯನ್ನು